ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:-ಎಡಿಎಂ2(1)/ಶಾ.ಮೊ.ನಿ-09/2018-19 ದಿನಾಂಕ:-09-05-2018

### ಸುತ್ತೋಲೆ

ವಿಷಯ:-ಶಾಲೆಗಳಲ್ಲಿ ಮೊಬೈಲ್ ಫೋನ್‌ಗಳ ಬಳಕೆಯನ್ನು ನಿಷೇಧಿಸುವ ಬಗ್ಗೆ.

*****

ಶಿಕ್ಷಕ ಮತ್ತು ನೌಕರರ ವರ್ಗದವರು ಕಾರ್ಯ ನಿರ್ವಹಿಸುತ್ತಿರುವ ಸಂದರ್ಭದಲ್ಲಿ ಶಾಲೆಗಳಲ್ಲಿ ಮೊಬೈಲ್‌ಗಳನ್ನು ಉಪಯೋಗಿಸುತ್ತಿರುವುದರಿಂದ ಬೋಧನಾ ಚಟುವಟಿಕೆಗಳಿಗೆ ತೊಂದರೆಯಾಗುತ್ತಿರುವುದನ್ನು ಗಮನಿಸಲಾಗಿದೆ. ಶಾಲೆಗಳಲ್ಲಿ ಉತ್ತಮ ವಾತಾವರಣವನ್ನು ಕಲ್ಪಿಸುವ ಸಲುವಾಗಿ ಮೊಬೈಲ್‌ಗಳ ಬಳಕೆಯನ್ನು ನಿಷೇಧಿಸುವುದು ಸೂಕ್ತವೆಂದು ಭಾವಿಸಲಾಗಿದೆ.

ಆದ್ದರಿಂದ ಶಾಲೆಗಳಲ್ಲಿ ಮೊಬೈಲ್‌ಗಳನ್ನು ಬಳಕೆ ಮಾಡುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಶಾಲೆಗಳಲ್ಲಿ ಬೋಧನಾ ಅವಧಿಯಲ್ಲಿ ಯಾವುದೇ ಶಿಕ್ಷಕರು ಮೊಬೈಲ್‌ಗಳನ್ನು ಉಪಯೋಗಿಸುವುದು ಕಂಡಲ್ಲಿ ಅವರ ಮೇಲೆ ಶಿಸ್ತು ಕ್ರಮ ಜರುಗಿಸಲು ಸೂಚಿಸಿದೆ. ಶಾಲೆಯ ಮುಖ್ಯ ಶಿಕ್ಷಕರು ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಂಡು ಶಾಲಾ ಅವಧಿಯಲ್ಲಿ ಯಾವುದೇ ಶಿಕ್ಷಕರು ಮೊಬೈಲ್‌ಗಳನ್ನು ಬಳಸದೇ ಇರುವಂತೆ ಕ್ರಮ ಕೈಗೊಳ್ಳಲು ಸೂಚಿಸಿದೆ.

ಶಾಲಾ ಮುಖ್ಯಶಿಕ್ಷಕರಿಗೆ ವಿನಾಯಿತಿ ನೀಡಲಾಗಿದ್ದರೂ ಸಹ, ಅವರು ತಮ್ಮ ಬೋಧನಾ ಕಾರ್ಯದ ಅವಧಿಯಲ್ಲಿ ಮೊಬೈಲ್‌ಗಳನ್ನು ಬಳಸುವುದನ್ನು ನಿಷೇಧಿಸಿದೆ ಹಾಗೂ ಯಾವುದೇ ಶಾಲೆಗಳಲ್ಲಿ ಶಾಲಾ ವೇಳೆಯಲ್ಲಿ ಮೊಬೈಲ್ ಉಪಯೋಗಿಸುತ್ತಿರುವುದು ಗಮನಕ್ಕೆ ಬಂದಲ್ಲಿ ಅಥವಾ ಈ ಸಂಬಂಧ ದೂರುಗಳು ಬಂದಲ್ಲಿ ಶಾಲೆಯ ಮುಖ್ಯ ಶಿಕ್ಷಕರೇ ಹೊಣೆಗಾರರಾಗುತ್ತಾರೆಂದು ತಿಳಿಸುತ್ತಾ, ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

(ಬಿ.ಕೆ.ಬಸವರಾಜ)
ನಿರ್ದೇಶಕರು[ಪ್ರಾಥಮಿಕ ಶಿಕ್ಷಣ]

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಅಗತ್ಯ ಕ್ರಮಕ್ಕಾಗಿ.

**ಪ್ರತಿಗಳನ್ನು ಮಾಹಿತಿಗಾಗಿ:-**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು-01 ರವರಿಗೆ ಮಾಹಿತಿಗಾಗಿ.
2. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01 ರವರಿಗೆ ಮಾಹಿತಿಗಾಗಿ.
4. ಕಛೇರಿ ಪ್ರತಿ.